# 2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ
# ಉತ್ತರ ಕನ್ನಡ : ಕಾರವಾರ

**ಎಸ್.ಸಿ.ಕೇಸ್ ನಂ. 20/2017**

**ದೋ.ಸಾ. :17 ಫಿ್ರಾ.ಸಾ. : 17**

| | | |
|---|---|---|
| ಸಾಕ್ಷಿಯ ಹೆಸರು | : | ಡಾ. ರಾಜೇಶ್ ರವಳು ನಾಯಕ್ |
| ತಂದೆಯ ಹೆಸರು | : | ರವಳು ನಾಯಕ್ |
| ವಯಸ್ಸು | : | 49 ವರ್ಷ |
| ಕೆಲಸ | : | ಅರೆವಳಿಕೆ ತಜ್ಞ, ತಾಯಿ ಮತ್ತು ಮಕ್ಕಳ ಆಸ್ಪತ್ರೆ, ಸಾಗರ |
| ವಾಸ | : | ಸಾಗರ |

**ದಿನಾಂಕಃ 20-11-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**(ದಂಡ ಪ್ರಕ್ರಿಯಾ ಸಂಹಿತೆ ಕಲಂ 299 ರಡಿಯಲ್ಲಿ ಸಾಕ್ಷಿಯ ವಿಚಾರಣೆ)**

**<u>ಮುಖ್ಯ ವಿಚಾರಣೆಃ ಸರಕಾರಿ ಅಭಿಯೋಜಕರಿಂದಃ-</u>**

1. ನಾನು ದಿ. 26-08-2016 ರಿಂದ ದಿ.18-01-2024 ರವರೆಗೆ ಅಂಕೋಲಾ ತಾಲೂಕಾ ಆಸ್ಪತ್ರೆಯಲ್ಲಿ ಅರೆವಳಿಕೆ ತಜ್ಞನಾಗಿ ಕರ್ತವ್ಯ ನಿರ್ವಹಿಸಿದ್ದೇನೆ. ದಿ.25-01-2017 ರಂದು ಅಂಕೋಲಾ ಪೊಲೀಸ್ ಠಾಣೆಯ ಸಿಬ್ಬಂದಿಯು ಈ ಪ್ರಕರಣದ ಆರೋಪಿಯಾದ ನಾರಾಯಣ ರಾಮಚಂದ್ರ ನಾಯಕ ರವರನ್ನು ಒಂದು ಕೋರಿಕೆ ಪತ್ರದೊಂದಿಗೆ ವೈದ್ಯಕೀಯ ಪರೀಕ್ಷೆಯ ಕುರಿತು ನಮ್ಮ ಆಸ್ಪತ್ರೆಗೆ ಕರೆದುಕೊಂಡು ಬಂದಿದ್ದು, ಅದರಂತೆ ನಾನು ವೈದ್ಯಕೀಯ ಪರೀಕ್ಷೆಯ ಕುರಿತು, ಆತನ ಸಮ್ಮತಿಯನ್ನು ಪಡೆದು ಆತನನ್ನು ವೈದ್ಯಕೀಯ ಪರೀಕ್ಷೆಗೊಳಪಡಿಸಿ, ಆತನು ಸಂಭೋಗ ಮಾಡಲು ಶಕ್ತನಿರುತ್ತಾನೆ ಎಂದು ವರದಿಯನ್ನು ನೀಡಿರುತ್ತೇನೆ. ಆ ಸಮಯದಲ್ಲಿ ಆತನ ಮೈಮೇಲಿದ್ದ ಬಟ್ಟೆಗಳನ್ನು ಹಾಗೂ ಉಗುರಿನ ತುದಿಯನ್ನು ಸಂಗ್ರಹಿಸಿ, ವರದಿಯೊಂದಿಗೆ ಪೊಲೀಸರಿಗೆ ನೀಡಿರುತ್ತೇನೆ. ಸಾಕ್ಷಿಯು ಪೊಲೀಸರಿಂದ ಬಂದ ಕೋರಿಕೆ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-23 ಎಂದು, ಸಾಕ್ಷಿಯ ಸಹಿಯನ್ನು ನಿಪಿ-23(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ತಾನು ನೀಡಿದ ಪರೀಕ್ಷಾ ವರದಿಯನ್ನು ನೋಡಿ

ಗುರುತಿಸಿದ್ದು, ಅದನ್ನು ನಿಪಿ–24 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ–24(ಎ) ಎಂದು ಗುರುತಿಸಲಾಯಿತು.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ.)

ಓ.ಹೇ.ಕೇ.ಸ.ಇ.

*Sd/-*

(ಮಾಯಣ್ಣ ಬಿ.ಎಲ್.)
2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರಕನ್ನಡ, ಕಾರವಾರ